**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 237/2023**

| | | | |
|---|---|---|---|
| **ಹೆಸರು** | **:** | **ರಾಜಕುಮಾರ** | **ಚಾ.ಸಾ. 3** |
| **ತಂದೆಯ ಹೆಸರು** | **:** | **ಬಕ್ಕಪ್ಪ** | **ಪ್ರಾ.ಸಾ. 2** |
| **ವಯಸ್ಸು** | **:** | **35 ವರ್ಷ** | **ದಿನಾಂಕಃ 02-09-2024.** |
| **ಉದ್ಯೋಗ** | **:** | **ಚಾಲಕ** | |
| **ವಾಸಸ್ಥಳ** | **:** | **ಐನೊಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ 2 ನಮ್ಮ ಊರಿನವನು. ಚಾಸಾ 1, 4 ರಿಂದ 6 ರವರು ನನಗೆ ಗೊತ್ತಿಲ್ಲ. ಈ ಮೊದಲು ಆರೋಪಿತರಿಗೆ ನಾನು ನೋಡಿಲ್ಲ.

ಈಗ ನೋಡುತ್ತಿರುವ ನಿಪಿ-1 ರ ದಾಖಲೆಯಲ್ಲಿ ನನ್ನ ಸಹಿ ಇದೆ. ನನ್ನ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಈಗ್ಗೆ 1 ವರ್ಷದ ಹಿಂದೆ ನಾನು ಚಿಂಚೋಳಿ ಪೋಲಿಸ ಠಾಣೆಗೆ ಬೇರೊಂದು ಕೇಸಿಗೆ ಸಂಬಂಧಪಟ್ಟಂತೆ ಹೋದಾಗ ಪೋಲಿಸರು ನನ್ನ ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕಾಗಿ ಸಹಿ ಪಡೆದುಕೊಂಡರು ಎಂದರೆ ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತು ಮಾಡಿಲ್ಲ ಮತ್ತು ಯಾವುದೇ ಸ್ಥಳಕ್ಕೆ ಕರೆದುಕೊಂಡು ಹೋಗಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-**

ದಿನಾಂಕಃ 17-03-2023 ರಂದು ಮಧ್ಯಾಹ್ನ 2-15 ಗಂಟೆ ಸುಮಾರಿಗೆ ಪೋಲಿಸರು ನನಗೆ ಮತ್ತು ಚಾಸಾ-2 ರವರಿಗೆ ಠಾಣೆಗೆ ಕರೆದು ಭಾತ್ಮಿ ಬಗ್ಗೆ ತಿಳಿಸಿದರು ಎಂದರೆ ಸರಿಯಲ್ಲ. ನಂತರ ನಾನು, ಚಾಸಾ-2 ರವರು ಪೋಲಿಸರ ಜೊತೆ ಮಧ್ಯಾಹ್ನ 2-30 ಗಂಟೆಗೆ ಭಾತ್ಮಿ ಸ್ಥಳಕ್ಕೆ ಹೊರಟು ತುಮಕುಂಟಾ ಹತ್ತಿರ ಧಾಭಾಗೆ ಮಧ್ಯಾಹ್ನ 3-00 ಗಂಟೆಗೆ ತಲುಪಿರುತ್ತೇವೆ ಎಂದರೆ ಸರಿಯಲ್ಲ. ಆಗ ಮರೆಯಲ್ಲಿ ನಿಂತು ನೋಡಿದಾಗ ಆರೋಪಿತರು ಅಕ್ರಮವಾಗಿ ಮದ್ಯಪಾನ ಮಾರಾಟ ಮಾಡುತಿದ್ದ ಎಂದರೆ ಸರಿಯಲ್ಲ. ಆಗ ಪೋಲಿಸರು ಅವರ

ಮೇಲೆ ದಾಳಿ ಮಾಡಿ ಅವರ ಹತ್ತಿರ ಇದ್ದ 650 ML ಅಳತೆಯ 30 Kingfisher ಬಿಯರ ಬಾಟಲಿಗಳು, 90 ML ನ 23 ವಿಸ್ಕಿ ಪೌಚಗಳು ಹಾಗೂ 180 ML ನ 9 ಓಟಿ ಫ್ಲಾಕೆಟುಗಳು ಜಪ್ತಿ ಮಾಡಿ ಜಪ್ತಿ ಪಂಚನಾಮೆ ಬರೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರೂ ಆರೋಪಿತರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ರಾಸಾಯನಿಕ ಪರೀಕ್ಷೆಗಾಗಿ ಸದರಿ ವಸ್ತುಗಳನ್ನು ಜಪ್ತಿ ಮಾಡಿ ಸೀಲ ಮಾಡಿರುತ್ತಾರೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ VHR ವಕೀಲರಿಂದಃ- ಇಲ್ಲಾ.</u>**

**ಮರುವಿಚಾರಣೆಃ ಇಲ್ಲಾ.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**